## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಜಲಾನಯನ ಅಭಿವೃದ್ಧಿ ಇಲಾಖೆ ಯೋಜನೆಗಳಡಿ ಮಣ್ಣು ಮತ್ತು ನೀರು ಸಂರಕ್ಷಣೆ ಕಾಮಗಾರಿಗಳ ಅನುಷ್ಠಾನಕ್ಕೆ ಸಂಬಂಧಪಟ್ಟಂತೆ ತಾಂತ್ರಿಕ ಅನುಮೋದನೆ ನೀಡುವ ಅಧಿಕಾರವನ್ನು ಮರುನಿಗದಿಪಡಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಕೃಇ 31 ಕೃಯೋಕಾ 2007 ದಿನಾಂಕ 23.05.2007.
2. ಸರ್ಕಾರದ ಆದೇಶ ಸಂಖ್ಯೆ: ಕೃಇ 166 ಕೃಪಸೇ 2011 ದಿನಾಂಕ 08.07.2014.
3. ಸರ್ಕಾರದ ಆದೇಶ ಸಂಖ್ಯೆ: ಕೃಇ 179 ಕೃಯೋಕಾ 2014(ಭಾ-1) ದಿನಾಂಕ 13.01.2015.
4. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ರವರ ಪ್ರಸ್ತಾವನೆ ಸಂಖ್ಯೆ: ಜಲಅಇ/ಜಕೃನಿ(ಭೂ.ಸಾ.ಸಂ)/ಕೃ.ಅ-1/ಎಸ್.ಆರ್/ ಪರಿಷ್ಕರಣೆ/2017-18 ದಿನಾಂಕ 24.01.2019.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ, ಜಲಾನಯನ ಅಭಿವೃದ್ಧಿ ಇಲಾಖೆಯ ಭೂಸಾರ ಸಂರಕ್ಷಣಾ ಕಾಮಗಾರಿಗಳ ಅಂದಾಜು ಪತ್ರಗಳಿಗೆ ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿಗಳಿಗೆ ರೂ.5.00 ಲಕ್ಷದವರೆಗೆ ಹಾಗೂ ಸಹಾಯಕ ಕೃಷಿ ನಿರ್ದೇಶಕರು (ಉಪ ವಿಭಾಗೀಯ ಮಟ್ಟ) ರವರಿಗೆ ರೂ.0.10 ಲಕ್ಷದವರೆಗೆ ಮಂಜೂರಾತಿ ನೀಡುವ ಅಧಿಕಾರ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ (2)ರ ಸರ್ಕಾರದ ಆದೇಶದಲ್ಲಿ, ಕೃಷಿ ಮತ್ತು ಜಲಾನಯನ ಅಭಿವೃದ್ಧಿ ಇಲಾಖೆಗಳನ್ನು ಮರು ಸಂಘಟನೆ ಮಾಡಿ ಆದೇಶ ಹೊರಡಿಸಲಾಗಿರುತ್ತದೆ. ಅದರನ್ವಯ, ಜಿಲ್ಲೆಯಲ್ಲಿ ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿ ಹುದ್ದೆ ಅಸ್ತಿತ್ವದಲ್ಲಿರುವುದಿಲ್ಲ. ಜಿಲ್ಲೆಯಲ್ಲಿ ಜಂಟಿ ಕೃಷಿ ನಿರ್ದೇಶಕರು / ಉಪ ಕೃಷಿ ನಿರ್ದೇಶಕರು ಹಾಗೂ ತಾಲ್ಲೂಕು ಮಟ್ಟದಲ್ಲಿ ಸಹಾಯಕ ಕೃಷಿ ನಿರ್ದೇಶಕರು ಇರುತ್ತಾರೆ.

ಮೇಲೆ ಓದಲಾದ (3)ರ ಸರ್ಕಾರದ ಆದೇಶದಲ್ಲಿ, ಕೃಷಿ ಮತ್ತು ಜಲಾನಯನ ಅಭಿವೃದ್ಧಿ ಇಲಾಖೆಗಳನ್ನು ಮರು ಸಂಘಟನೆ ಮಾಡಿದ ಪ್ರಯುಕ್ತ ಭೂಸಾರ ಸಂರಕ್ಷಣಾ ಕಾಮಗಾರಿಗಳ ಅಂದಾಜು ಪತ್ರಗಳಿಗೆ ಉಪ ಕೃಷಿ ನಿರ್ದೇಶಕರು / ಜಂಟಿ ಕೃಷಿ ನಿರ್ದೇಶಕರು ರವರಿಗೆ ರೂ.5.00 ಲಕ್ಷದವರೆಗೆ ಹಾಗೂ ಸಹಾಯಕ ಕೃಷಿ ನಿರ್ದೇಶಕರಿಗೆ (ತಾಲ್ಲೂಕು ಮಟ್ಟ) ರೂ.0.10 ಲಕ್ಷದವರೆಗೆ ಮಂಜೂರಾತಿ ನೀಡುವ ಅಧಿಕಾರ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ (4)ರಲ್ಲಿ ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ರವರು ತಮ್ಮ ಪ್ರಸ್ತಾವನೆಯಲ್ಲಿ, ಸರ್ಕಾರದ ಆದೇಶ ಸಂ. ಆಇ 03 ಟಿಎಫ್‌ಪಿ 2018 ದಿನಾಂಕ 14.05.2018 ರಲ್ಲಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ರೂ.2.00 ಲಕ್ಷಗಳವರೆಗೆ, ಉಪ ವಿಭಾಗ ಮಟ್ಟದ ಅಧಿಕಾರಿಗಳಿಗೆ ರೂ.10.00 ಲಕ್ಷದವರೆಗೆ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ರೂ.50.00 ಲಕ್ಷಗಳವರೆಗೆ ಆಡಳಿತಾತ್ಮಕ ಮಂಜೂರಾತಿ ನೀಡಲು ಅಧಿಕಾರವನ್ನು ನೀಡಲಾಗಿರುತ್ತದೆ. ಜಲಾನಯನ ಅಭಿವೃದ್ಧಿ ಇಲಾಖೆಯ ದರಗಳ ಅನುಸೂಚಿಯನ್ನು 2015 ರಿಂದ ಈವರೆಗೆ ಹಣದುಬ್ಬರ

(Inflation), ಕನಿಷ್ಠ ವೇತನ ಕಾಯ್ದೆ ಮತ್ತು ಸಾಮಾಗ್ರಿಗಳ ದರ ಹೆಚ್ಚಳದ ಆಧಾರದ ಮೇಲೆ ಹಲವು ಬಾರಿ ಪರಿಷ್ಕರಿಸಲಾಗಿದೆ. ಇದರಿಂದಾಗಿ ಕಾಮಗಾರಿಗಳ ಅಂದಾಜು ವೆಚ್ಚಗಳು ಕೂಡ ಹೆಚ್ಚಾಗಿರುತ್ತದೆ. ಮುಂದುವರೆದು, ಯೋಜನೆಗಳಡಿ ಮಣ್ಣು ಮತ್ತು ನೀರು ಸಂರಕ್ಷಣೆ ಕಾಮಗಾರಿಗಳ ಅನುಷ್ಠಾನಕ್ಕೆ ಸಂಬಂಧಪಟ್ಟಂತೆ ತಾಂತ್ರಿಕ ಅನುಮೋದನೆ ನೀಡುವ ಅಧಿಕಾರವನ್ನು ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರಿಗೆ ರೂ.2.00 ಲಕ್ಷಗಳವರೆಗೆ ವಿಭಾಗೀಯ ಉಪ ಕೃಷಿ ನಿರ್ದೇಶಕರಿಗೆ ರೂ.10.00 ಲಕ್ಷಗಳವರೆಗೆ ಹಾಗೂ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರಿಗೆ ರೂ.50.00 ಲಕ್ಷಗಳವರೆಗೆ ತಾಂತ್ರಿಕ ಅನುಮೋದನೆ ಅಧಿಕಾರ ನೀಡಲು ಸರ್ಕಾರದ ಆದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ.

ಮೇಲ್ಕಂಡ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 34 ಕೃಯೋಕಾ 2019, ಬೆಂಗಳೂರು, ದಿನಾಂಕ 07.09.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಜಲಾನಯನ ಅಭಿವೃದ್ಧಿ ಇಲಾಖೆಯ ಕಾಮಗಾರಿಗಳ ಅಂದಾಜು ವೆಚ್ಚಗಳು ಹೆಚ್ಚಾಗಿದ್ದು, ಮಣ್ಣು ಮತ್ತು ನೀರು ಸಂರಕ್ಷಣಾ ಕಾಮಗಾರಿಗಳನ್ನು ಸುಸೂತ್ರವಾಗಿ ಅನುಷ್ಠಾನಗೊಳಿಸಲು ಅನುವಾಗುವ ದೃಷ್ಟಿಯಿಂದ ಅಧಿಕಾರಿಗಳಿಗೆ ಈ ಕೆಳಕಂಡಂತೆ ತಾಂತ್ರಿಕ ಮಂಜೂರಾತಿಗೆ ನೀಡಲಾಗಿರುವ ಅಧಿಕಾರಗಳನ್ನು ಪರಿಷ್ಕರಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

(ರೂ. ಲಕ್ಷಗಳಲ್ಲಿ)

| ಕ್ರ ಸಂ. | ಮಂಜೂರಾತಿ ನೀಡುವ ಅಧಿಕಾರಿ | ಅಂದಾಜು ಪತ್ರಗಳಿಗೆ ತಾಂತ್ರಿಕ ಮಂಜೂರಾತಿ ನೀಡುವ ಮೊತ್ತ |
|---|---|---|
| 1. | ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು | 10.00 |
| 2 | ವಿಭಾಗೀಯ ಉಪ ಕೃಷಿ ನಿರ್ದೇಶಕರು | 5.00 |
| 3. | ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರು | 1.00 |

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 389 ವೆಚ್ಚ-4/2019 ದಿನಾಂಕ 26.08.2019ರ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

B S Nagarathnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

7/9/19

ಇವರಿಗೆ:-

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2) ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.

3) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
4) ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
5) ಆಯುಕ್ತರು/ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
6) ನಿರ್ದೇಶಕರು, ರಾಜ್ಯ ಹುಜೂರು ಖಜಾನೆ ಇಲಾಖೆ,
7) ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8) ರಾಜ್ಯದ ಎಲ್ಲಾ ಜಂಟಿ ಕೃಷಿ ನಿರ್ದೇಶಕರು/ಉಪ ಕೃಷಿ ನಿರ್ದೇಶಕರು/ಸಹಾಯಕ ಕೃಷಿ ನಿರ್ದೇಶಕರು (ಕೃಷಿ ಮತ್ತು ಜಲಾನಯನ ಅಭಿವೃದ್ಧಿ ಇಲಾಖೆಯ ನಿರ್ದೇಶಕರ ಮೂಲಕ)
9) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-4), ಬೆಂಗಳೂರು.
10) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
11) ಸರ್ಕಾರದ ಉಪ ಕಾರ್ಯದರ್ಶಿ-1 & 2 ರವರ ಆಪ್ತ ಸಹಾಯಕರು, ಕೃಷಿ ಇಲಾಖೆ.
12) ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ.
13) ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.